ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕಲಬುರಗಿ ಜಿಲ್ಲೆ ಸೇಡಂ ತಾಲ್ಲೂಕಿನ ಮಳಖೇಡದಲ್ಲಿನ ಕಾಗಿಣಾ ಸೇತುವೆ ಕುರಿತು

ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) -

33 (289) ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮಳಖೇಡದಲ್ಲಿನ ಕಾಗಿಣಾ

ಸೇತುವೆಯು ಪ್ರವಾಹದಿಂದಾಗಿ ಮುಳುಗಿ ಸಂಚಾರ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹೊಸ ಸೇತುವೆ ನಿರ್ಮಾಣ ಮಾಡಲು ಸರ್ಕಾರ ನಿರ್ಧರಿಸಿದೆಯೇ; ನಿರ್ಧರಿಸಿದ್ದಲ್ಲಿ, ಹೊಸ ಸೇತುವೆ ನಿರ್ಮಾಣದ ಸಂಪೂರ್ಣ ವಿವರಗಳನ್ನು ನೀಡುವುದು ;

(ಇ) ಹೊಸ ಸೇತುವೆ ಮಂಜೂರಾಗಿದ್ದರೆ ಕಾಮಗಾರಿ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಕಲಬುರಗಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಸರ್ಕಾರಿ ನೌಕರರ ವಸತಿಗಳನ್ನು ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಕಟ್ಟಡಗಳಿಗಾಗಿ ಖರ್ಚು ಮಾಡಿರುವ ಅನುದಾನ ಎಷ್ಟು ;

(ಊ) ಈ ಕಟ್ಟಡಗಳು ಪೂರ್ಣಗೊಂಡ ನಂತರ ಎಷ್ಟು ಜನ ಸರ್ಕಾರಿ ನೌಕರರಿಗೆ ವಸತಿ ಗೃಹಗಳು ಲಭ್ಯವಾಗಲಿವೆ ? (ಮಾಹಿತಿ ನೀಡುವುದು)